# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

13

ಇಲಾಖೆ / ವಿಷಯ : DEPARTMENT / SUBJECT: ಕೋರ್ಟ್ ವಾರ್ತೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 22/10/20

# ನಗರಸಭೆ ಅಧ್ಯಕ್ಷ-ಉಪಾಧ್ಯಕ್ಷ ಚುನಾವಣೆಗೆ ಹೈಕೋರ್ಟ್ ಅಸ್ತು

## ನ.2ರೊಳಗೆ ಚುನಾವಣಾ ಪ್ರಕ್ರಿಯೆ ಮುಗಿಸಿ

**ಬೆಂಗಳೂರು:** ರಾಜ್ಯದ ಎಲ್ಲಾ 59 ನಗರಸಭೆಗಳ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಗಳ ಚುನಾವಣೆಗೆ ಹಸಿರು ನಿಶಾನೆ ತೋರಿಸಿರುವ ಹೈಕೋರ್ಟ್, ನ.2 ರೊಳಗೆ ಚುನಾವಣಾ ಪ್ರಕ್ರಿಯೆ ಪೂರ್ಣಗೊಳಿಸುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿದೆ.

ನಗರಸಭೆಗಳ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಗಳಿಗೆ ಮೀಸಲಾತಿ ನಿಗದಿಪಡಿಸಿ ಅ.8ರಂದು ಹೊರಡಿಸಿದ್ದ ಅಧಿಸೂಚನೆಗೆ ತಡೆ ನೀಡಿ ಹಾಗೂ ಮೀಸಲಾತಿ ಆವರ್ತನೆ ಬಗ್ಗೆ ಪರಿಶೀಲಿಸಿ ಕರಡು ಸಲ್ಲಿಸಲು ತ್ರಿಸದಸ್ಯ ಸಮಿತಿ ನೇಮಕ ಮಾಡಿ ಏಕಸದಸ್ಯ ನ್ಯಾಯಪೀಠ ಹೊರಡಿಸಿದ್ದ ಮಧ್ಯಂತರ ಆದೇಶ ಪ್ರಶ್ನಿಸಿ ರಾಜ್ಯ ಸರ್ಕಾರದ ಮೇಲ್ಮನವಿಯನ್ನು ಹಿರಿಯ ನ್ಯಾಯಮೂರ್ತಿ ಬಿ.ವಿ. ನಾಗರತ್ನ ಹಾಗೂ ನ್ಯಾ. ಎನ್.ಎಸ್. ಸಂಜಯ್ ಗೌಡ ಅವರಿದ್ದ ವಿಭಾಗೀಯ ನ್ಯಾಯಪೀಠ ಬುಧವಾರ ವಿಚಾರಣೆ ನಡೆಸಿತು.

ವಾದ ಆಲಿಸಿದ ಬಳಿಕ, ಮೀಸಲಾತಿ ಆವರ್ತನೆ ಕುರಿತು ಅಧ್ಯಯನ ನಡೆಸಿ ಕರಡು ಸಲ್ಲಿಸಲು ಹೆಚ್ಚುವರಿ ಅಡ್ವೋಕೇಟ್ ಜನರಲ್ ಧ್ಯಾನ್ ಚಿನ್ನಪ್ಪ ಚುನಾವಣಾ ಆಯೋಗದ ಹಿರಿಯ ನ್ಯಾಯವಾದಿ ಕೆ.ಎನ್. ಫಣೀಂದ್ರ ಹಾಗೂ ಹಿರಿಯ ನ್ಯಾಯವಾದಿ ಎ.ಎಸ್. ಪೊನ್ನಣ್ಣ ಅವರನ್ನೊಳಗೊಂಡ ತ್ರಿಸದಸ್ಯ ಸಮಿತಿ ರಚಿಸಿ ಅ.15ರಂದು ಏಕಸದಸ್ಯ ಹೊರಡಿಸಿದ್ದ ಆದೇಶಕ್ಕೆ ತಡೆ ನೀಡಿತು. ಅಲ್ಲದೇ, ಅಧಿಸೂಚನೆಗೆ ಏಕ ಸದಸ್ಯ ನ್ಯಾಯಪೀಠ ನೀಡಿದ್ದ ಮಧ್ಯಂತರ ತಡೆಯನ್ನು ತೆರವುಗೊಳಿಸಿ ರಾಜ್ಯದ ಎಲ್ಲಾ ನಗರಸಭೆಗಳ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಗಳ ಚುನಾವಣೆಗಳನ್ನು ನ.2 ರೊಳಗೆ ಪೂರ್ಣಗೊಳಿಸಬೇಕು. ಹಾಗೆಯೇ, ಅರ್ಜಿಯಲ್ಲಿ ಪ್ರಶ್ನಿಸಲಾಗಿರುವ ಹಾಸನ, ಅರಸೀಕೆರೆ, ಶಿಡ್ಲಘಟ್ಟ, ಕೊಪ್ಪಳ ಹಾಗೂ ಹರಿಹರ ನಗರಸಭೆಗಳ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಗಳಿಗೂ ಚುನಾವಣೆ ನಡೆಯಲಿ. ಆದರೆ, ಅದು ಅರ್ಜಿಯ ಅಂತಿಮ ತೀರ್ಮಾನಕ್ಕೆ ಒಳಪಡಲಿದೆ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ.

# ನವೆಂಬರ್‌ನಲ್ಲಿ ಗ್ರಾ.ಪಂ. ಚುನಾವಣೆ ನಡೆಸಲು ಸಿದ್ಧತೆ: ಚು. ಆಯೋಗ



**ಬೆಂಗಳೂರು:** ಗ್ರಾಮ ಪಂಚಾಯಿತಿ ಚುನಾವಣೆಯನ್ನು ನವೆಂಬರ್‌ನಲ್ಲಿ ನಡೆಸಲು ಸಿದ್ಧತೆ ನಡೆಸಲಾಗಿದೆ ಎಂದು ರಾಜ್ಯ ಚುನಾವಣಾ ಆಯೋಗ ಹೈಕೋರ್ಟ್ ಸ್ಪಷ್ಟಪಡಿಸಿದೆ.

ಅವಧಿ ಮುಗಿದ ಗ್ರಾಪಂಗಳಿಗೆ ಶೀಘ್ರ ಚುನಾವಣೆ ನಡೆಸಲು ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ಕೋರಿ ಕಾಂಗ್ರೆಸ್‌ನ ವಿಧಾನ ಪರಿಷತ್ ಸದಸ್ಯ ಕೆ.ಸಿ. ಕೊಂಡಯ್ಯ ಹಾಗೂ ಇತರರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ್ ನೇತೃತ್ವದ ವಿಭಾಗೀಯ ನ್ಯಾಯಪೀಠ ಬುಧವಾರ ವಿಚಾರಣೆ ನಡೆಸಿತು.

ಈ ವೇಳೆ ಆಯೋಗದ ಪರ ಹಿರಿಯ ನ್ಯಾಯವಾದಿ ಕೆ.ಎನ್. ಫಣೀಂದ್ರ ಹಾಜರಾಗಿ, ನವೆಂಬರ್‌ನಲ್ಲಿ ಗ್ರಾಪಂ ಚುನಾವಣೆ ನಡೆಸಲು ಆಯೋಗವು ಸಿದ್ಧತೆ ನಡೆಸಿದೆ. ಆ ಸಂಬಂಧಪಟ್ಟ ಇಲಾಖೆ ಹಾಗೂ ಅಧಿಕಾರಿಗಳೊಂದಿಗೆ ಹಲವು ಸುತ್ತಿನ ಸಮಾಲೋಚನೆ ನಡೆಸಲಾಗಿದೆ. ಚುನಾವಣೆಗೆ ಪ್ರತ್ಯೇಕ ಎಸ್ಒಪಿ ಜಾರಿಗೆ ತರಲಾಗಿದೆ ಎಂದರು.

ರಾಜ್ಯ ಸರ್ಕಾರದ ಪರ ವಕೀಲರು, ಚುನಾವಣೆ ನಡೆಸುವ ವಿಚಾರವಾಗಿ ಎಲ್ಲಾ ಜಿಲ್ಲಾಧಿಕಾರಿಗಳೊಂದಿಗೆ ಚರ್ಚೆ ನಡೆಸಲಾಗಿದೆ. ಈ ವಿಚಾರಕ್ಕೆ ಸಂಬಂಧಿಸಿದಂತೆ ಅಡ್ವೋಕೇಟ್ ಜನರಲ್ ಅವರು ವಾದ ಮಂಡಿಸಲಿದ್ದಾರೆ. ಅದಕ್ಕಾಗಿ ಸ್ವಲ್ಪ ಕಾಲಾವಕಾಶ ನೀಡಬೇಕು ಎಂದು ಮನವಿ ಮಾಡಿದರು. ಅದಕ್ಕೆ ಪ್ರತಿಕ್ರಿಯಿಸಿದ ನ್ಯಾಯಪೀಠ, ಪ್ರತ್ಯೇಕ ಹಂತದಲ್ಲಿ ಚುನಾವಣೆ ನಡೆಸಬಹುದಲ್ಲವೇ? ಕೊರೊನಾ ಕಡಿಮೆ ಇರುವ ಕಡೆ ಮೊದಲ ಹಂತದಲ್ಲಿ ಚುನಾವಣೆ ನಡೆಸುವ ಬಗ್ಗೆ ರೂಪುರೇಷೆಗಳನ್ನು ರಚಿಸಬಹುದಲ್ಲವೇ ಎಂದು ಸರ್ಕಾರಿ ವಕೀಲರನ್ನು ಪ್ರಶ್ನಿಸಿತು.

ಎಲ್ಲಾ ಜಿಲ್ಲಾಧಿಕಾರಿಗಳೊಂದಿಗೆ ಆಯೋಗ ಚರ್ಚಿಸಿದೆ. ಬಹು ಹಂತಗಳಲ್ಲಿ ಚುನಾವಣೆ ನಡೆಸಲಾಗುತ್ತಿದೆ. ಒಂದೇ ತಾಲೂಕಿನಲ್ಲಿ ಎರಡು ಹಂತಗಳಲ್ಲಿ ಚುನಾವಣೆ ನಡೆಸಲು ಯೋಜನೆ ಹಾಕಿಕೊಳ್ಳಲಾಗಿದೆ ಎಂದು ಆಯೋಗದ ಪರ ವಕೀಲರು ಮಾಹಿತಿ ನೀಡಿದರು. ವಾದ-ಪ್ರತಿವಾದ ಆಲಿಸಿದ ನ್ಯಾಯಪೀಠ, ಅಡ್ವೋಕೇಟ್ ಜನರಲ್ ವಾದ ಮಂಡಿಸಬೇಕಿರುವ ಕಾರಣ ವಿಚಾರಣೆಯನ್ನು ಅ.23ಕ್ಕೆ ಮುಂದೂಡಿತು.